ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಕೊಡಗು ಜಿಲ್ಲೆಯಲ್ಲಿನ ಕೋವಿಡ್ ಚಿಕಿತ್ಸೆ ಕೇಂದ್ರಗಳ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) –

83 (71) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯಲ್ಲಿ ಎಷ್ಟು ಕೋವಿಡ್ ಚಿಕಿತ್ಸಾ ಕೇಂದ್ರಗಳನ್ನು ತೆರೆಯಲಾಗಿದೆ; ಪ್ರತಿ ಕೇಂದ್ರಕ್ಕೆ ಒದಗಿಸಿರುವ ಸೌಲಭ್ಯಗಳು, ವೈದ್ಯರು ಹಾಗೂ ಇತರೆ ಸಿಬ್ಬಂದಿಗಳ ವಿವರಗಳನ್ನು ಒದಗಿಸುವುದು;

(ಆ) ಜಿಲ್ಲೆಯಲ್ಲಿ ಇದುವರೆಗೂ ಕೋವಿಡ್ ಸೋಂಕಿಗೆ ತುತ್ತಾದವರ ಸಂಖ್ಯೆ ಎಷ್ಟು; ಇವರಲ್ಲಿ ಸಂಪೂರ್ಣ ಗುಣಮುಖರಾದವರು ಹಾಗೂ ಮೃತರಾದವರ ಸಂಖ್ಯೆ ಎಷ್ಟು;

(ಇ) ಜಿಲ್ಲೆಯಲ್ಲಿ ಕೋವಿಡ್ ಸೋಂಕಿಗೆ ಪ್ರಸ್ತುತ ಚಿಕಿತ್ಸೆ ಪಡೆಯುತ್ತಿರುವವರ ಸಂಖ್ಯೆ ಎಷ್ಟು;

(ಈ) ಕೋವಿಡ್ ಸೋಂಕಿತರಿಗಾಗಿ ಕೊಡಗು ಜಿಲ್ಲೆಯಲ್ಲಿ ಇಲ್ಲಿಯವರೆಗೂ ಖರ್ಚು ಮಾಡಿರುವ ಹಣ ಎಷ್ಟು? (ಸಂಪೂರ್ಣ ವಿವರ ನೀಡುವುದು)